# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 159 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 16.02.2022 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಅನೇಕ ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ಅಸಂಖ್ಯಾತ ಕಂದಾಯ ಅಪೀಲು ಪ್ರಕರಣಗಳಿದ್ದರೂ ಜಿಲ್ಲಾಧಿಕಾರಿಗಳು ನಿಗಧಿತ ಸಮಯದಲ್ಲಿ ಮುತುವರ್ಜಿ ವಹಿಸಿ ಇತ್ಯರ್ಥಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ಚುನಾವಣೆ / ಆಡಳಿತಾತ್ಮಕ ತುರ್ತು ಕೆಲಸಗಳು / ಕೋವಿಡ್-19 ಇತ್ಯಾದಿ ಕಾರ್ಯದೊತ್ತಡದಿಂದಾಗಿ ಅಪೀಲು ಪ್ರಕರಣಗಳನ್ನು ನಿಗಧಿತ ಅವಧಿಯೊಳಗೆ ಇತ್ಯರ್ಥಪಡಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ. | ಕಂದಾಯ ನ್ಯಾಯಾಲಯಗಳ ವಿಳಂಬ ಧೋರಣೆಯಿಂದಾಗಿ ಜನ ಸಾಮಾನ್ಯರಿಗೆ ವ್ಯಾಪಕ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ. | ಬಂದಿದ್ದರೆ, ಅದನ್ನು ನಿಭಾಯಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? | ಬಾಕಿ ಇರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ದೃಷ್ಟಿಯಿಂದ ಎಲ್ಲಾ ಅರೆ ನ್ಯಾಯಿಕ ಕಂದಾಯ ನ್ಯಾಯಾಲಯಗಳು ಪ್ರಕರಣಗಳ ವಿಚಾರಣೆಯನ್ನು ವಾರದ ಪ್ರತಿ ಮಂಗಳವಾರ ಮತ್ತು ಗುರುವಾರಗಳಂದು ಪೂರ್ಣದಿನ ಕಡ್ಡಾಯವಾಗಿ ನಡೆಸುವಂತೆ ಸರ್ಕಾರ ಸುತ್ತೋಲೆ ಸಂಖ್ಯೆ:ಕಂಇ 17 ಟಿಆರ್ಎಂ 2021, ದಿನಾಂಕ:22.02.2021ರಲ್ಲಿ ನಿರ್ದೇಶನ ನೀಡಲಾಗಿದೆ.<br><br>ಕಂದಾಯ ನ್ಯಾಯಾಲಯ ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್ ಎಂ 2019, ದಿನಾಂಕ:18.02.2021ರಲ್ಲಿ ಮ್ಯುಟೇಷನ್, ಖಾತಾ ಮತ್ತು ಆರ್.ಟಿ.ಸಿ. ಬದಲಾವಣೆಗಳಿಗೆ ಸಂಬಂಧಿಸಿದಂತೆ ಸಲ್ಲಿಕೆಯಾಗುವ ಅರ್ಜಿಗಳು ವಿವಾದರಹಿತವಾದ ಪ್ರಕರಣಗಳಾಗಿದ್ದಲ್ಲಿ ಖಾತೆ ಬದಲಾವಣೆಯನ್ನು 60 ದಿನಗಳಲ್ಲಿ ಭೂಮಿ ತಂತ್ರಾಂಶದ ಮೂಲಕ ಸಕಾಲ ಸೇವೆಗಳಡಿ ಈಗಾಗಲೇ ಕ್ರಮವಹಿಸಲಾಗುತ್ತಿದೆ. ಸದರಿ ಅರ್ಜಿಯು ಆಸ್ತಿಯ ಹಕ್ಕಿನ ಹೊರತಾದ ವಿವಾದಿತ ಪ್ರಕರಣವಾಗಿದ್ದಲ್ಲಿ, ಸದರಿ ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 129 ರನ್ವಯ ಪರಿಶೀಲಿಸಿ, ಅರ್ಜಿ ಸ್ವೀಕೃತಗೊಂಡ ಮೂರು (03) ತಿಂಗಳೊಳಗಾಗಿ ಇತ್ಯರ್ಥಪಡಿಸಲು ತಹಶೀಲ್ದಾರ್‌ರವರು ಕ್ರಮವಹಿಸುವಂತೆ ಹಾಗೂ ಕರ್ನಾಟಕ ಭೂ ಕಂದಾಯ ಅಧಿನಿಯಮಗಳು, 1964ರ (ಅಪೀಲು/ಪುನರೀಕ್ಷಣೆ) ಕಲಂ 136(2) ಹಾಗೂ 136(3)ರ ಅಡಿಯಲ್ಲಿ ಕ್ರಮವಾಗಿ ಉಪ ವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಿಸುವ ಮೇಲ್ಮನವಿ ಪ್ರಕರಣಗಳನ್ನು ಉಪ ವಿಭಾಗಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಎದುರುದಾರರಿಗೆ ನೋಟೀಸು ನೀಡಿದ ದಿನದಿಂದ ಆರು (06) ತಿಂಗಳ ಒಳಗಾಗಿ ಇತ್ಯರ್ಥಪಡಿಸುವಂತೆ ಸೂಚಿಸಲಾಗಿದೆ. |

| | | |
|---|---|---|
| | | ಕಂದಾಯ ನ್ಯಾಯಾಲಯಗಳಲ್ಲಿ ದಾಖಲಾಗುವ ಅರೆ ನ್ಯಾಯಿಕ ಪ್ರಕರಣಗಳನ್ನು ತೀವ್ರಗತಿಯಲ್ಲಿ ವಿಲೇವಾರಿ ಮಾಡುವ ದೃಷ್ಟಿಯಿಂದ ರೆವಿನ್ಯೂ ಕೋರ್ಟ್ ಕೇಸ್ ಮಾನಿಟರಿಂಗ್ ಸಿಸ್ಟಮ್ [Revenue Court Case Monitoring System (RCCMS)] ತಂತ್ರಾಂಶದಲ್ಲಿ ನಿರ್ವಹಿಸಲಾಗುತ್ತಿದ್ದು, ಸಾರ್ವಜನಿಕರು ಪ್ರಕರಣಗಳ ವಿಚಾರಣಾ ದಿನಾಂಕ, ಆದೇಶದ ಪ್ರತಿಗಳು ಇತ್ಯಾದಿ ವಿವರಗಳನ್ನು ಆನ್‌ಲೈನ್ ಮೂಲಕವೇ ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br><br>ಪ್ರತಿ ಮಾಹೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಅರೆ ನ್ಯಾಯಿಕ ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಿ, ಪ್ರತಿ ಜಿಲ್ಲಾಧಿಕಾರಿಯವರು ಪ್ರತಿ ತಿಂಗಳು 75 ಪ್ರಕರಣಗಳನ್ನು ಹಾಗೂ ಉಪ ವಿಭಾಗಾಧಿಕಾರಿಯವರು 100 ಪ್ರಕರಣಗಳನ್ನು ಇತ್ಯರ್ಥಪಡಿಸುವಂತೆ ಗುರಿ ನಿಗಧಿಪಡಿಸಲಾಗಿದೆ.<br><br>ಮುಂದುವರಿದು, ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಪ್ರಕರಣಗಳು ಕಂಡುಬಂದ ಹಿನ್ನೆಲೆಯಲ್ಲಿ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಈಗಿರುವ ಎರಡು ವಿಶೇಷ ಜಿಲ್ಲಾಧಿಕಾರಿ ಹುದ್ದೆಗಳ ಜೊತೆಗೆ ಮತ್ತೊಂದು ವಿಶೇಷ ಜಿಲ್ಲಾಧಿಕಾರಿ-3 ಹುದ್ದೆಯನ್ನು ಸೃಜನೆ ಮಾಡಿ ಆದೇಶ ಹೊರಡಿಸಲಾಗಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಅತಿ ಹೆಚ್ಚು ಪ್ರಕರಣಗಳು ಬಾಕಿ ಇರುವ ಕಡೆಗಳಲ್ಲಿ ಉಪ ವಿಭಾಗಾಧಿಕಾರಿ ಮಟ್ಟದ ಅಧಿಕಾರಿಗಳನ್ನು ನೇಮಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಅಧಿಕಾರ ನೀಡುವ ಸಂಬಂಧ ಸೂಕ್ತ ಕಾಯ್ದೆಗೆ ಸೂಕ್ತ ತಿದ್ದುಪಡಿ ತರಲು ಪರಿಶೀಲಿಸಲಾಗುತ್ತಿದೆ. |

ಸಂಖ್ಯೆ:ಆರ್‌ಡಿ 47 ಟಿಆರ್‌ಎಂ 2022

**(ಆರ್. ಅಶೋಕ)**
ಕಂದಾಯ ಸಚಿವರು